ಸಮಾಚಾರ ಸಣ್ಣದಲ್ಲ

ಹುತ್ತರಿ ಹಬ್ಬ 23ರಂದು

ನಾಪೋಕ್ಲು: ಕೊಡಗಿನ ಕುಲದೇವ ಎಂದೇ ಖ್ಯಾತವಾಗಿರುವ ಪಾಡಿ ಶ್ರೀ ಇಗ್ಗುತ್ತಪ್ಪ ದೇವ ಸನ್ನಿಧಿಯಲ್ಲಿ ಹುತ್ತರಿ ಹಬ್ಬದ ದಿನ ಹಾಗೂ ಮುಹೂರ್ತವನ್ನು ದೇವಾಲಯದ ಜ್ಯೋತಿಷಿ ಅಮ್ಮಂಗೇರಿ ಶಶಿಕುಮಾರ್ ನಿಶ್ಚಯಿಸಿದರು. ನ.23ರಂದು ಪಾಡಿ ಶ್ರೀ ಇಗ್ಗುತ್ತಪ್ಪ ದೇವಾಲಯದಲ್ಲಿ ಉತ್ಸವ, ದೇವರು ಮಲ್ಮ ಬೆಟ್ಟಕ್ಕೆ ಸಾಗುವುದು, ಪೂಜಾ ಕೈಂಕರ್ಯಗಳು ನಡೆಯಲಿದ್ದು, ಅದೇ ದಿನ ರಾತ್ರಿ ಹುತ್ತರಿ ಹಬ್ಬವು ನಡೆಯಲಿದೆ ಎಂದು ಶಶಿಕುಮಾರ್ ತಿಳಿಸಿದ್ದಾರೆ. ಅಂದು ರೋಹಿಣಿ ನಕ್ಷತ್ರದಲ್ಲಿ ಕದಿರು ತೆಗೆಯುವುದು, ಶ್ರೀ ಇಗ್ಗುತ್ತಪ್ಪ ದೇವಾಲಯದಲ್ಲಿ ಶುಕ್ರವಾರ ರಾತ್ರಿ 7.15ಕ್ಕೆ ನೆರೆ ಕಟ್ಟುವುದು, 8.15ಕ್ಕೆ ಕದಿರು ತೆಗೆಯುವುದು, 9.15ಕ್ಕೆ ಭೋಜನಕ್ಕೆ ಪ್ರಾಶಸ್ತ್ಯ ಸಮಯವಾಗಿದೆ ಎಂದು ಜ್ಯೋತಿಷಿಗಳು ತಿಳಿಸಿದ್ದಾರೆ. ಸಾರ್ವಜನಿಕವಾಗಿ ಎಲ್ಲ ಮನೆಗಳಲ್ಲಿ ರಾತ್ರಿ 7.30ಕ್ಕೆ ಭತ್ತದ ನೆರೆ ಕಟ್ಟುವುದು, 8.30ಕ್ಕೆ ಕದಿರು ತೆಗೆಯುವುದು, 9.30ಕ್ಕೆ ಭೋಜನಕ್ಕೆ ಮುಹೂರ್ತ ನಿಗಧಿಯಾಗಿದೆ.

ವೈಭವದ ಹಾಸನಾಂಬ ಉತ್ಸವಕ್ಕೆ ಇಂದು ತೆರೆ

ಹಾಸನ: ಪ್ರಸಕ್ತ ಸಾಲಿನ ಪಂಚಾಂಗದ ಪ್ರಕಾರ ಆಶ್ವೀಜ ಮಾಸದ ಒಂಬತ್ತು ದಿನಗಳ ಕಾಲ ಭಕ್ತರಿಗೆ ದರ್ಶನವಿತ್ತ ಹಾಸನಾಂಬೆ ಶುಕ್ರವಾರ ಮಧ್ಯಾಹ್ನದ ವೇಳೆಗೆ ಮತ್ತೆ ಅಂತರ್ಗತಳಾಗುತ್ತಾಳೆ. ಹೀಗೆ ಈ ವರ್ಷದ ತಾಯಿಯ ಉತ್ಸವ ಹಾಗೂ ದರ್ಶನದ ಪುಣ್ಯ ಕ್ಷಣಗಳನ್ನು ಪಡೆದುಕೊಂಡ ಲಕ್ಷ ಲಕ್ಷ ಮಂದಿ ಭಕ್ತರು ಧನ್ಯತಾ ಭಾವ ಮೆರೆಯುತ್ತಿದ್ದಾರೆ. ಇದು ಹಾಸನಾಂಬ ಐತಿಹ್ಯದ ಸುವರ್ಣ ಅಧ್ಯಾಯಕ್ಕೆ ಸೇರಿಕೊಳ್ಳುವ ಮತ್ತೊಂದು ಆಧ್ಯಾತ್ಮಿಕ ದಾಖಲೆ. ಕೊನೆಯ ದಿನವಾದ ಗುರುವಾರ ದೇವಿಯ ದರ್ಶನಕ್ಕೆ ಭಕ್ತ ಸಾಗರವೇ ಹರಿದು ಬಂದಿತ್ತು.

ಪಟಾಕಿ ದುರಂತ ಬಾಲಕಿಗೆ ಗಾಯ

ತುರುವೇಕೆರೆ: ತಾಲೂಕಿನ ಕಲ್ಕೆರೆ ಗ್ರಾಮದಲ್ಲಿ ಆಕಸ್ಮಿಕ ಪಟಾಕಿ ದುರಂತದಲ್ಲಿ ಬಾಲಕಿಗೆ ಗಾಯಗಳಾಗಿವೆ. ಇಲ್ಲಿನ ಡಿ.ಕಲ್ಕೆರೆ ಗ್ರಾಮದ ವಾಸಿ ಸುಷ್ಮಾ ಬಸವರಾಜು ದಂಪತಿ ಮಗಳಾದ ವರ್ಷಿಣಿ(8) ಪಟಾಕಿ ದುರಂತದಲ್ಲಿ ಗಾಯಗೊಂಡವಳು. ವರ್ಷಿಣಿಯ ಬೆನ್ನಿನ ಭಾಗಕ್ಕೆ ಗಾಯಗಳಾಗಿದ್ದು ಆಸ್ಪತ್ರೆಗೆ ದಾಖಲಾಗಿದ್ದಾಳೆ. ತನ್ನ ಗೆಳೆಯರೊಂದಿಗೆ ಗ್ರಾಮದ ಶಾಲಾ ಮೈದಾನದಲ್ಲಿ ಪಟಾಕಿ ಹಚ್ಚಿ ಸಂಭ್ರಮಿಸುತ್ತಿದ್ದಾಗ ಅವಘಡ ಸಂಭವಿಸಿದೆ. ಬಾಲಕಿ ಧರಿಸಿದ್ದ ಬಟ್ಟೆಗೆ ಆಕಸ್ಮಿಕವಾಗಿ ಪಟಾಕಿ ಕಿಡಿ ತಗುಲಿದ್ದರಿಂದ ದೇಹಕ್ಕೆ ಗಾಯಗಳಾಗಿವೆ.

ನೇಣಿಗೆ ಶರಣು

ರಾಮನಗರ: ಚನ್ನಪಟ್ಟಣ ತಾಲೂಕಿನ ಬೇವೂರು ಗ್ರಾಮದಲ್ಲಿ ಅಪ್ರಾಪ್ತ ಯುವ ಜೋಡಿಯ ಪ್ರೀತಿಗೆ ಪೋಷಕರು ಅಡ್ಡಿಪಡಿಸಿದ್ದರಿಂದ ಮನನೊಂದ ಯುವತಿ ನೇಣು ಬಿಗಿದುಕೊಂಡು ಆತ್ಮಹತ್ಯೆ ಮಾಡಿಕೊಂಡಿದ್ದಾಳೆ. ಗ್ರಾಮದ ಎಚ್.ಆರ್.ಯೋಗಿತಾ(17) ಮೃತ ಯುವತಿ. ಪಿಯುಸಿ ವ್ಯಾಸಂಗ ಮಾಡುತ್ತಿದ್ದ ಯೋಗಿತಾ ಹಾಗೂ ಅದೇ ಗ್ರಾಮದ 17 ವರ್ಷದ ಯುವಕ ಪರಸ್ಪರ ಪ್ರೀತಿಸುತ್ತಿದ್ದರು. ಇಬ್ಬರೂ ಪ್ರೀತಿಸುತ್ತಿರುವ ವಿಚಾರ ಯೋಗಿತಾ ಪೋಷಕರಿಗೆ ತಿಳಿದು ಯುವಕನ ವಿರುದ್ಧ ಪೊಲೀಸ್ ಠಾಣೆಯಲ್ಲಿ ದೂರು ದಾಖಲಿಸಿದ್ದರು. ರಾಜಿ ನಡೆದು ಯೋಗಿತಾ ಜತೆಗೆ ಮಾತುಕತೆ ಮುಂದುವರಿಸದಂತೆ ಪೊಲೀಸರು ಯುವಕನಿಗೆ ಎಚ್ಚರಿಕೆ ನೀಡಿದ್ದರು. ಯೋಗಿತಾ ಯುವಕನ ಮೊಬೈಲ್‌ಗೆ ಕರೆ ಮಾಡಿದಾಗ ಠಾಣೆಯಲ್ಲಿ ನಡೆದ ವಿಚಾರ ತಿಳಿಸಿ ಮತ್ತೆ ಕರೆ ಮಾಡದಂತೆ ಸೂಚಿಸಿದ್ದನು. ಇದರಿಂದ ಮನನೊಂದ ಯೋಗಿತಾ ಮನೆಯಲ್ಲಿ ನೇಣಿಗೆ ಶರಣಾಗಿದ್ದಾಳೆ.

ಅಗಲಿದ ಜೀವ

ವಿ.ಮೋಹನ್ ಕುಮಾರ್

ರಾಮನಗರ : ಹಿರಿಯ ಪತ್ರಕರ್ತ ವಿ.ಮೋಹನ್ ಕುಮಾರ್(55) ನಿಧನ ಹೊಂದಿದ್ದಾರೆ. ಕೆಲ ದಿನಗಳಿಂದ ಅವರು ಅನಾರೋಗ್ಯದಿಂದ ಬಳಲುತ್ತಿದ್ದರು. ಬುಧವಾರ ರಾತ್ರಿ 11.30ಗಂಟೆಗೆ ಅವರು ಇಹಲೋಕ ತ್ಯಜಿಸಿದ್ದಾರೆ. ಮಡದಿ ಮತ್ತು ಇಬ್ಬರು ಪುತ್ರರನ್ನು ಅಗಲಿದ್ದಾರೆ. ದಲಿತ ಪರ ಸಂಘಟನೆಗಳ ಹೋರಾಟಗಳಲ್ಲಿ ಸಕ್ರಿಯವಾಗಿ ತೊಡಗಿಸಿಕೊಂಡಿದ್ದ ಅವರು ಜನದನಿ ಸಂಜೆ ದಿನ ಪತ್ರಿಕೆಯ ಸಂಪಾದಕ ರಾಗಿದ್ದರು. ತದನಂತರ ವಾರ್ತಾ ಭಾರತಿ ದಿನ ಪತ್ರಿಕೆಯ ವರದಿಗಾರರಾಗಿಯೂ ಕಾರ್ಯನಿರ್ವಹಿಸಿದ್ದರು. ಬೆಂಗಳೂರು ಗ್ರಾಮಾಂತರ (ಅವಿಭಜಿತ) ಜಿಲ್ಲಾ ಪತ್ರಕರ್ತರ ಸಂಘದ ಅಧ್ಯಕ್ಷರಾಗಿಯೂ ಕಾರ್ಯ ನಿರ್ವಹಿಸಿದ್ದರು. ಕೆಲವು ತಿಂಗಳಿಂದ ಅನಾರೋಗ್ಯದಿಂದ ಬಳಲುತ್ತಿದ್ದ ಅವರು ಬುಧವಾರ ರಾತ್ರಿ ಕೊನೆಯುಸಿರೆಳೆದಿದ್ದಾರೆ. ಸ್ವಗ್ರಾಮ ವಡ್ಡರದೊಡ್ಡಿಯಲ್ಲಿ ಅಂತ್ಯಕ್ರಿಯೆ ನೆರವೇರಿದೆ.

ಟಿಪ್ಪು ಜಯಂತಿಗೆ ಕಾಂಗ್ರೆಸ್ ಬೆಂಬಲ | ಮದ್ಯ ಮಾರಾಟ ನಿಷೇಧ | 2 ಸಾವಿರ ಪೊಲೀಸರ ನಿಯೋಜನೆ

ಕೊಡಗು ಜಿಲ್ಲಾದ್ಯಂತ ನಿಷೇಧಾಜ್ಞೆ ಜಾರಿ

ವಿಶ್ವವಾಣಿ ಸುದ್ದಿಮನೆ ಮಡಿಕೇರಿ

ಕೊಡಗಿನ ಹಲವೆಡೆ ಟಿಪ್ಪುಜಯಂತಿ ವಿರೋಧಿ ಪ್ರತಿಭಟನೆಗೆ ಸಿದ್ಧತೆ ನಡೆಯುತ್ತಿರುವಂತೆಯೇ ಜಿಲ್ಲಾಡಳಿತ ಶುಕ್ರವಾರ ಸಂಜೆಯಿಂದ ಭಾನುವಾರ ಬೆಳಗ್ಗೆವರೆಗೆ ಸೆಕ್ಷನ್ 144ರನ್ವಯ ನಿಷೇಧಾಜ್ಞೆ ಜಾರಿಗೊಳಿಸಲು ಮುಂದಾಗಿದೆ.

ಪಿ.ಐ.ಶ್ರೀವಿದ್ಯಾ
ಜಿಲ್ಲಾಧಿಕಾರಿ

ಕೊಡಗು ಜಿಲ್ಲೆಯಲ್ಲಿ ಶಾಂತಿ, ಕಾನೂನು ಸುವ್ಯವಸ್ಥೆ ಕಾಪಾಡುವ ದೃಷ್ಟಿಯಿಂದ ದಂಡ ಪ್ರಕ್ರಿಯಾ ಸಂಹಿತೆ ಸೆಕ್ಷನ್ 144, 144(ಎ)ರಂತೆ ನ.9ರ ಸಂಜೆ 6ರಿಂದ 11ರ ಬೆಳಗ್ಗೆ 6 ಗಂಟೆವರೆಗೆ ಕೊಡಗಿನಾದ್ಯಂತ ನಿಷೇಧಾಜ್ಞೆ ಜಾರಿಗೊಳಿಸಿ ಜಿಲ್ಲಾಧಿಕಾರಿ ಪಿ.ಐ.ಶ್ರೀವಿದ್ಯಾ ಆದೇಶ ಹೊರಡಿಸಿದ್ದಾರೆ. ಸರಕಾರಿ ಕಾರ್ಯಕ್ರಮ, ಪೂರ್ವ ನಿಯೋಜಿತ ನಿಶ್ಚಿತಾರ್ಥ, ಮದುವೆ, ನಾಮಕರಣ, ಗೃಹಪ್ರವೇಶ ಮುಂತಾದ ಸಮಾರಂಭ ಹೊರತುಪಡಿಸಿ ಉಳಿದಂತೆ ಯಾವುದೇ ಸಭೆ, ಸಮಾರಂಭ, ಮೆರವಣಿಗೆ ನಡೆಸಬಾರದು. ಎಲ್ಲ ಸಾರ್ವಜನಿಕ, ರಾಜಕೀಯ ಬಹಿರಂಗ ಸಭೆ-ಸಮಾರಂಭ, ಪ್ರಚೋಧನಾಕಾರಿ ಹೇಳಿಕೆ, ಭಾಷಣ, ಮೆರವಣಿಗೆ, ಪ್ರತಿಭಟನೆ, ಜಾಥಾ, ಧರಣಿ, ಮುಷ್ಕರ, ರಸ್ತೆ ತಡೆ, ಮುತ್ತಿಗೆಗಳನ್ನು ಸಂಪೂರ್ಣವಾಗಿ ನಿಷೇಧಿಸಿದೆ.

ಖಾಸಗಿ ವ್ಯಕ್ತಿಗಳು ಯಾವುದೇ ರೀತಿಯ ಆಯುಧ ಹತ್ಯಾರು ಹೊಂದಿರುವುದು, ಪ್ರದರ್ಶಿಸುವುದು ಅಥವಾ ಹಿಡಿದುಕೊಂಡು ತಿರುಗಾಡುವುದನ್ನು ನಿಷೇಧಿಸಿದೆ.

ಈ ನಿಷೇಧಾಜ್ಞೆಯನ್ನು ಜಿಲ್ಲೆಯ ಶಾಂತಿ, ಕಾನೂನು ಸುವ್ಯವಸ್ಥೆ ಹಾಗೂ ಸಾರ್ವಜನಿಕ ಹಿತದೃಷ್ಟಿಯಿಂದ ಹೊರಡಿಸಲಾಗಿದೆ. ಶಾಂತಿ ಕಾಪಾಡುವ ನಿಟ್ಟಿನಲ್ಲಿ ನ.11ರ ಬೆಳಗ್ಗೆ 8 ಗಂಟೆಯವರೆಗೆ ಕೊಡಗು ಜಿಲ್ಲೆಯಾದ್ಯಾಂತ ಎಲ್ಲ ಮದ್ಯದ ಅಂಗಡಿಗಳು, ಬಾರ್ ಮತ್ತು ರೆಸ್ಟೋರೆಂಟ್ ಮತ್ತು ಕ್ಲಬ್, ಹೋಟೆಲ್‌ಗಳಲ್ಲಿ ಮದ್ಯ ಮಾರಾಟ ನಿಷೇಧಿಸಿ ಜಿಲ್ಲಾಧಿಕಾರಿ ಆದೇಶ ಹೊರಡಿಸಿದ್ದಾರೆ.

ವಿಶೇಷ ಕಾರ್ಯನಿರ್ವಾಹಕ ದಂಡಾಧಿಕಾರಿ ನೇಮಕ: ನ.10ರಂದು ಟಿಪ್ಪು ಸುಲ್ತಾನ್ ಜಯಂತಿ ಆಚರಿಸುತ್ತಿರುವ ಹಿನ್ನೆಲೆ, ಯಾವುದೇ ರೀತಿಯ ಅಹಿತಕರ ಘಟನೆಗಳು ಸಂಭವಿಸದಂತೆ ಹಾಗೂ ಮುಂಜಾಗ್ರತಾ ಕ್ರಮವಾಗಿ, ಕಾನೂನು ಸುವ್ಯವಸ್ಥೆ ಕಾಪಾಡುವ ಸಲುವಾಗಿ ನ.9, 10ರಂದು ಹೋಬಳಿ ಕೇಂದ್ರಗಳಲ್ಲಿ ಕರ್ತವ್ಯ ನಿರ್ವಹಿಸಲು ವಿಶೇಷ ಕಾರ್ಯ ನಿರ್ವಾಹಕ ದಂಡಾಧಿಕಾರಿಗಳನ್ನು ನಿಯೋಜಿಸಿ ಸರಕಾರ ಆದೇಶಿಸಿದೆ.

ಕಾಂಗ್ರೆಸ್ ಬೆಂಬಲ: ಮುಂದಿನ ಲೋಕಸಭಾ ಚುನಾವಣೆಯಲ್ಲಿ ಸೋಲುವ ಆತಂಕ ಎದುರಿಸುತ್ತಿರುವ ಬಿಜೆಪಿ ಟಿಪ್ಪು ಜಯಂತಿಯನ್ನು ನೆಪ ಮಾಡಿಕೊಂಡು ಶಾಂತಿ, ಸೌಹಾರ್ದತೆಯ ಕೊಡಗು ಜಿಲ್ಲೆಯಲ್ಲಿ ಅಶಾಂತಿ ಮೂಡಿಸಲು ಮುಂದಾಗಿದ್ದು, ಭೀತಿಯ ವಾತಾವರಣವನ್ನು ಸೃಷ್ಟಿಸುತ್ತಿದೆ ಎಂದು ಕೊಡಗು ಜಿಲ್ಲಾ ಕಾಂಗ್ರೆಸ್ ಸಮಿತಿಯ ನಾನಾ ಘಟಕಗಳು ಆರೋಪಿಸಿವೆ.

ಕಾಂಗ್ರೆಸ್ ಅಲ್ಪಸಂಖ್ಯಾತರ ಘಟಕದ ಕೊಡಗು ಜಿಲ್ಲಾಧ್ಯಕ್ಷ ಕೆ.ಎ.ಯಾಕುಬ್, ಮಡಿಕೇರಿ ನಗರ ಕಾಂಗ್ರೆಸ್ ಅಧ್ಯಕ್ಷ ಕೆ.ಯು.ಅಬ್ದುಲ್ ರಜಾಕ್, ಯುವ ಕಾಂಗ್ರೆಸ್ ಘಟಕದ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಶಾಫಿ ಕೊಟ್ಟಮುಡಿ, ಸರಕಾರ ನಡೆಸುತ್ತಿರುವ ಟಿಪ್ಪು ಜಯಂತಿಗೆ ಬೆಂಬಲ ವ್ಯಕ್ತಪಡಿಸುವುದು ನಮ್ಮ ಕರ್ತವ್ಯವಾಗಿದೆ.

ಟಿಪ್ಪು ಜಯಂತಿಯನ್ನು ಆಚರಿಸಲು ಕೊಡಗಿನಿಂದ ಯಾರೂ ಅರ್ಜಿ ಹಾಕಿಲ್ಲ. ಸರಕಾರ ಒಳ್ಳೆಯ ಉದ್ದೇಶವನ್ನಿಟ್ಟುಕೊಂಡೆ ಟಿಪ್ಪು ಜಯಂತಿಯನ್ನು ಆಚರಿಸುತ್ತಿದ್ದು, ಬಿಜೆಪಿ ಮಂದಿ ಕ್ಷುಲ್ಲಕ ರಾಜಕಾರಣಕ್ಕಾಗಿ ಇದನ್ನು ವಿರೋಧಿಸುತ್ತಿದ್ದಾರೆ ಎಂದು ಹೇಳಿದ್ದಾರೆ.

ಚೆಕ್‌ಪೋಸ್ಟ್‌ಗಳಲ್ಲಿ ಬಿಗಿ ಬಂದೋಬಸ್ತ್

ಕೊಡಗು ಜಿಲ್ಲೆಯ ಅಂಚಿನಲ್ಲಿರುವ ಕೇರಳ, ವಯನಾಡು, ಕಾಸರಗೋಡು, ಹಾಸನ, ದಕ್ಷಿಣ ಕನ್ನಡ, ಮೈಸೂರು ಜಿಲ್ಲೆಗೆ ಹೊಂದಿಕೊಂಡಂತೆ 10 ಕಡೆಗಳಲ್ಲಿ ಚೆಕ್‌ಪೋಸ್ಟ್ ತೆರೆಯಲಾಗಿದ್ದು, ಈ ಚೆಕ್‌ಪೋಸ್ಟ್ ಮೂಲಕ ಹೊರ ಜಿಲ್ಲೆಯಿಂದ ಬರುವ ಪ್ರತಿಯೊಂದು ವಾಹನಗಳನ್ನು ತಪಾಸಣೆ ನಡೆಸಲಾಗುತ್ತಿದೆ. ಆ ಮೂಲಕ ಕಿಡಿಗೇಡಿಗಳು ಜಿಲ್ಲೆಗೆ ಬಂದು ದುಷ್ಕೃತ್ಯಗಳನ್ನು ನಡೆಸಲು ಮುಂದಾಗದಂತೆ ನಿಗಾವಹಿಸಲಾಗಿದೆ. ಈ ಚೆಕ್‌ಪೋಸ್ಟ್‌ಗಳಲ್ಲಿ ತಲಾ 4ರಂತೆ ಒಟ್ಟು 40 ಸಿಸಿ ಟಿವಿ ಅಳವಡಿಸಲಾಗಿದೆ. ಜಿಲ್ಲೆಯ ಒಳಭಾಗದಲ್ಲಿ 40 ಚೆಕ್‌ಪೋಸ್ಟ್ ಅಳವಡಿಸುವ ಮೂಲಕ ಕಿಡಿಗೇಡಿ ಕೃತ್ಯಗಳಿಗೆ ಕಡಿವಾಣ ಹಾಕುವ ಪ್ರಯತ್ನ ಈಗಾಗಲೇ ಆರಂಭವಾಗಿದೆ. ಯಾವುದೇ ಅಹಿತಕರ ಘಟನೆಗಳಿಗೆ ಆಸ್ಪದವಾಗದ ರೀತಿಯಲ್ಲಿ 75 ಪೆಟ್ರೋಲಿಂಗ್ ವಾಹನಗಳ ಮೂಲಕ ದಿನದ ಇಪ್ಪತ್ತನಾಲ್ಕು ಗಂಟೆ ಗಸ್ತು ವ್ಯವಸ್ಥೆಯನ್ನು ಈಗಾಗಲೇ ಏರ್ಪಡಿಸಲಾಗಿದೆ. ಇದರೊಂದಿಗೆ ಟಿಪ್ಪು ಜಯಂತಿಯ ಸಂದರ್ಭ ಮರಗಳನ್ನು ಕಡಿದು ಹಾಕುವ ಪ್ರಕರಣಗಳನ್ನು ಎದುರಿಸಲು ಅರಣ್ಯ ಇಲಾಖೆಯ ಸಹಕಾರದೊಂದಿಗೆ 7 ರ‍್ಯಾಪಿಡ್ ರೆಸ್ಪಾನ್ಸ್ ತಂಡವನ್ನು ನಿಯೋಜಿಸಲಾಗಿದೆ ಎಂದು ತಿಳಿಸಿದರು. ಈ ಸಂದರ್ಭದಲ್ಲಿ ಹೊರ ಜಿಲ್ಲೆಯ ಸುಮಾರು 2 ಸಾವಿರ ಪೊಲೀಸ್ ಸಿಬ್ಬಂದಿಗಳು, ಅಧಿಕಾರಿಗಳು ಕರ್ತವ್ಯ ನಿರ್ವಹಿಸಲಿದ್ದಾರೆ. ಚಾಮರಾಜನಗರದ ಹೆಚ್ಚುವರಿ ಪೊಲೀಸ್ ಅಧೀಕ್ಷಕರನ್ನು ಜಿಲ್ಲೆಗೆ ನಿಯುಕ್ತಿ ಮಾಡಲಾಗಿದೆ, 6 ಡಿವೈಎಸ್ಪಿ, 20 ಪೊಲೀಸ್ ಇನ್‌ಸ್ಪೆಕ್ಟರ್, 46 ಸಬ್ ಇನ್‌ಸ್ಪೆಕ್ಟರ್, 104 ಎಎಸ್‌ಐ, 300 ಹೋಂ ಗಾರ್ಡ್ , 850 ಪೊಲೀಸ್ ಸಿಬ್ಬಂದಿ, 21 ಡಿಎಆರ್ ತುಕಡಿ, 10 ಕೆಎಸ್‌ಆರ್‌ಪಿ ತುಕಡಿಗಳನ್ನು ಹಾಗೂ ರ‍್ಯಾಪಿಡ್ ಆ್ಯಕ್ಷನ್ ಫೋರ್ಸ್‌ನ್ನು ನಿಯುಕ್ತಿಗೊಳಿಸಲಾಗಿದೆಯೆಂದು ಡಾ.ಸುಮನ್ ಪನ್ನೇಕರ್ ಮಾಹಿತಿ ನೀಡಿದ್ದಾರೆ.

ಸಿಸಿ ಕ್ಯಾಮೆರಾ	200
ಪೊಲೀಸ್ ಸಿಬ್ಬಂದಿ	2000
ಚೆಕ್‌ಪೋಸ್ಟ್	10
ರ‍್ಯಾಪಿಡ್ ರೆಸ್ಪಾನ್ಸ್	7
ಗಸ್ತು ವಾಹನ	75

> ಟಿಪ್ಪು ಜಯಂತಿ ಹಿನ್ನೆಲೆ ಶನಿವಾರ ಕೊಡಗು ಜಿಲ್ಲಾದ್ಯಂತ 200 ಸಿಸಿ ಕ್ಯಾಮೆರಾ ಅಳವಡಿಸಲಾಗುತ್ತಿದೆ. ಆಹ್ವಾನ ಪತ್ರಿಕೆ ಇದ್ದವರಿಗೆ ಮಾತ್ರ ಕಾರ್ಯಕ್ರಮ ನಡೆಯುವ ಸಭಾಂಗಣಕ್ಕೆ ಪ್ರವೇಶ ಕಲ್ಪಿಸಲಾಗುತ್ತದೆ. ಕಾನೂನು ಭಂಗವುಂಟು ಮಾಡಿದವರ ವಿರುದ್ಧ ಕಠಿಣ ಕ್ರಮ ಕೈಗೊಳ್ಳಲಾಗುತ್ತದೆ.
>
> -ಡಾ.ಸುಮನ್ ಪನ್ನೇಕರ್, ಎಸ್ಪಿ

ಶಬರಿಮಲೆ ಸಂರಕ್ಷಣಾ ರಥಯಾತ್ರೆಯಲ್ಲಿ ಬಿಜೆಪಿ ರಾಜ್ಯಾಧ್ಯಕ್ಷ ಬಿ.ಎಸ್.ಯಡಿಯೂರಪ್ಪ ಆರೋಪ

ಕೇರಳ ಕರಾವಳಿಯಲ್ಲೂ ಟಿಪ್ಪು ಸುಲ್ತಾನ್ ಆಕ್ರಮಣ

ವಿಶ್ವವಾಣಿ ಸುದ್ದಿಮನೆ ಕಾಸರಗೋಡು

ಶಬರಿಮಲೆ ರಥಯಾತ್ರೆಯನ್ನು ಕಾಸರಗೋಡಿನ ಮಧೂರಿನಲ್ಲಿ ಕರ್ನಾಟಕ ರಾಜ್ಯ ಬಿಜೆಪಿ ರಾಜ್ಯಾಧ್ಯಕ್ಷ ಬಿ.ಎಸ್.ಯಡಿಯೂರಪ್ಪ ಉದ್ಘಾಟಿಸಿ, ಮಾತನಾಡಿದರು.

ಕೇರಳದ ಕರಾವಳಿ ಪ್ರದೇಶಗಳಲ್ಲಿ ಟಿಪ್ಪು ಆಕ್ರಮಣ ನಡೆಸುವ ಮೂಲಕ ಹಲವು ಹಿಂದೂ ದೇವಸ್ಥಾನಗಳನ್ನು ಧ್ವಂಸ ಮಾಡಿದ್ದಾನೆ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಬಿ.ಎಸ್.ಯಡಿಯೂರಪ್ಪ ಆರೋಪಿಸಿದರು.

ಇಲ್ಲಿನ ಮಧೂರು ಮದನಂತೇಶ್ವರ ಸಿದ್ಧಿವಿನಾಯಕ ಕ್ಷೇತ್ರ ಪರಿಸರದಲ್ಲಿ ನಡೆದ ರಾಜ್ಯ ಎನ್‌ಡಿಎ ಮೈತ್ರಿಕೂಟದ ಶಬರಿಮಲೆ ಸಂರಕ್ಷಣಾ ರಥಯಾತ್ರೆ ಉದ್ಘಾಟಿಸಿ ಮಾತನಾಡಿದ ಅವರು, ಧಾರ್ಮಿಕ ಪುನರುತ್ಥಾನಕ್ಕೆ ಶ್ರಮಿಸಿದ ಮಹಾಮಹಿಮರ ನೆಲದಲ್ಲಿ ಧರ್ಮಾಚರಣೆಯ ಅಧಃಪತನಕ್ಕೆ ಕೇರಳ ಸರಕಾರ ಪ್ರಯತ್ನಿಸುತ್ತಿರುವುದು ವಿಷಾದಕಾರಿ ಸಂಗತಿ. ಮಧೂರು ದೇವಸ್ಥಾನಕ್ಕೂ ಟಿಪ್ಪು ಲಗ್ಗೆಯಿಟ್ಟಿದ್ದ ಎಂಬುದನ್ನು ಕೇಳಲ್ಪಟ್ಟೆ. ಇಂತಹ ಕಟು ಸತ್ಯಗಳ ಮಧ್ಯೆಯೂ ಕರ್ನಾಟಕದಲ್ಲಿ ಟಿಪ್ಪು ಜಯಂತಿ ಆಚರಣೆ ಮಾಡುತ್ತಿರುವುದು ನಮ್ಮ ದುರ್ದೈವ. ಇದನ್ನು ತಕ್ಷಣ ನಿಲ್ಲಿಸಬೇಕಿದೆ ಎಂದು ಯಡಿಯೂರಪ್ಪ ಒತ್ತಾಯಿಸಿದರು.

ಶ್ರೀ ನಾರಾಯಣ ಗುರುಗಳಂತಹ ಮಹನೀಯರು ರಾಜ್ಯದಲ್ಲಿ ಹುಟ್ಟದಿರದೆ ಇರುತ್ತಿದ್ದರೆ ನಾವು ಹಿಂದೂಗಳು ಎಂದು ಹೇಳಲು ಸಾಧ್ಯವಾಗುತ್ತಿರಲಿಲ್ಲ, ಅವರ ನೆನಪನ್ನು ಮಾಡಿಕೊಳ್ಳುವುದು ನಮ್ಮೆಲ್ಲರ ಕರ್ತವ್ಯ. ಕೇರಳ ಮತ್ತು ಕರ್ನಾಟಕ ಜನತೆಗೆ ದೀಪಾವಳಿ ಹಬ್ಬದ ಶುಭಾಶಯವನ್ನು ತಿಳಿಸಿದ ಯಡಿಯೂರಪ್ಪ, ಹಬ್ಬದ ಸಂದರ್ಭ ಧರ್ಮ ಆಚರಣೆಗಳ ಉಳಿಕೆಗಾಗಿ ರಸ್ತೆಗಿಳಿದು ಹೋರಾಟ ನಡೆಸುವ ಅನಿವಾರ್ಯತೆ ಎದುರಾಗಿರುವುದು ನೋವಿನ ಸಂಗತಿ ದುರದೃಷ್ಟಕರ. ದೀಪಾವಳಿ ಹಬ್ಬ ಮನುಕುಲದ ಉದ್ಧಾರಕ್ಕೆ ದಾರಿ ದೀಪವಾಗಲಿ ಎಂದು ಹಾರೈಸಿದರು.

ಶಬರಿಮಲೆ ವಿಚಾರದಲ್ಲಿ ಸುಪ್ರೀಂ ಕೋರ್ಟ್ ತೀರ್ಪನ್ನು ಭಕ್ತ ಜನ ಸಮೂಹದ ಭಾವನೆಗಳಿಗೆ ಬೆಲೆ ಕೊಡದೆ ಅನುಷ್ಠಾನಗೊಳಿಸಲು ಪ್ರಯತ್ನಿಸುತ್ತಿರುವ ಕೇರಳ ಎಡರಂಗ ಸರಕಾರದ ಕ್ರಮ ಸಫಲವಾಗದು. ಶಬರಿಮಲೆ ಸ್ತ್ರೀ ಪ್ರವೇಶದ ವಿಚಾರದಲ್ಲಿ ಕೇರಳ ಮುಖ್ಯಮಂತ್ರಿ ಪಿಣರಾಯಿ ವಿಜಯನ್ ನೇತೃತ್ವದ ಸರಕಾರ ಜನರ ಭಾವನೆ ಕೆರಳುವಂತೆ ಮಾಡಿದ್ದು, ರಾಜ್ಯದ ಕಮ್ಯೂನಿಸ್ಟ್ ಹಾಗೂ ಕಾಂಗ್ರೆಸ್ ಶಬರಿಮಲೆ ವಿಚಾರದಲ್ಲಿ ಸರಿಯಾದ ನಿಲುವು ತಾಳಲು ವಿಫಲವಾಗಿವೆ. ರಾಜ್ಯವನ್ನಾಳುತ್ತಿರುವ ಪಿಣರಾಯಿ ವಿಜಯನ್ ಸರಕಾರ ಶಬರಿಮಲೆ ವಿಚಾರದಲ್ಲಿ ಇನ್ನಾದರು ಎಚ್ಚೆತ್ತುಕೊಳ್ಳಬೇಕು, ಸರ್ವೋಚ್ಚ ನ್ಯಾಯಾಲಯದಲ್ಲಿ ಮರು ಪರಿಶೀಲನೆ ಅರ್ಜಿ ಹಾಕುವ ಮೂಲಕ ಶಬರಿಮಲೆ ಸಮಸ್ಯೆ ಶೀಘ್ರವೇ ಬಗೆಹರಿಸಬೇಕು ಎಂದರು.

ಕರ್ನಾಟಕ ವಿಧಾನ ಪರಿಷತ್ ಪ್ರತಿಪಕ್ಷ ನಾಯಕ ಕೋಟ ಶ್ರೀನಿವಾಸ ಪೂಜಾರಿ ಮಾತನಾಡಿ, ಧರ್ಮ ದಂಡದ ಹಸ್ತಾಂತರದ ಮೂಲಕ ಕೇರಳ ಬದಲಾಗಲಿದೆ. ಧರ್ಮ ನಂಬಿಕೆಗಳ ವಿಚಾರಗಳಲ್ಲಿ ಜನರ ಭಾವನೆಗಳನ್ನು ಘಾಸಿಗೊಳಿಸುವ ನಿರ್ಧಾರಗಳನ್ನು ಸರಕಾರಗಳು ಕೈಗೊಳ್ಳಬಾರದು. ಶಬರಿಮಲೆ ವಿಚಾರದಲ್ಲಿ ಸುಪ್ರೀಂ ಕೋರ್ಟ್‌ನಲ್ಲಿ ಪಕ್ವ ವಾದವನ್ನು ಸರಕಾರ ಮಂಡಿಸಿದ್ದರೆ ಇಂತಹ ಸಮಸ್ಯೆಗಳೇ ಬರುತ್ತಿರಲಿಲ್ಲ ಎಂದರು.

ಬಿಜೆಪಿ ಜಿಲ್ಲಾಧ್ಯಕ್ಷ ಅಡ್ವ ಕೆ. ಶ್ರೀಕಾಂತ್, ಕೇರಳ ಬಿಜೆಪಿ ವರಿಷ್ಠ ಪಿ.ಕೆ. ಕೃಷ್ಣದಾಸ್, ರಥಯಾತ್ರೆಯ ಮುಂದಾಳತ್ವ ವಹಿಸಿದ್ದ ತುಷಾರ್ ವೆಳ್ಳಾಪಳ್ಳಿ ಮಾತನಾಡಿದರು.

ಗುರುಪ್ರಸಾದ್ ಪ್ರಭು, ಹಿರಿಯ ಶಾಸಕ ಒ.ರಾಜಗೋಪಾಲ್, ದ.ಕ. ಸಂಸದ ನಳಿನ್ ಕುಮಾರ್ ಕಟೀಲ್, ಬಿಜೆಪಿ ಕೇರಳ ರಾಜ್ಯಾಧ್ಯಕ್ಷ ಪಿ.ಎಸ್.ಶ್ರೀಧರನ್ ಪಿಳ್ಳೆ, ಕೇರಳ ಬಿಜೆಪಿ ರಾಜ್ಯ ಸಮಿತಿ ಸದಸ್ಯರಾದ ಪಿ.ಕೆ. ಕೃಷ್ಣದಾಸ್, ವಿ.ಕೆ. ಸಂಜೀವನ್, ಕೆ.ಟಿ.ರಮೇಶ್, ಕರ್ನಾಟಕ ಬಿಜೆಪಿ ಶಾಸಕರಾದ ಸಂಜೀವ ಮಠಂದೂರು, ಭರತ್ ಶೆಟ್ಟಿ, ಡಿ.ವೇದವ್ಯಾಸ ಕಾಮತ್, ಸುನಿಲ್ ಶೆಟ್ಟಿ, ರಾಜೇಶ್ ನಾಯಕ್, ಉಮಾನಾಥ ಮತ್ತಿತರರು ಇದ್ದರು.

> ಒಂದೆಡೆ ರಥದ ಯಾತ್ರೆ ಬಗ್ಗೆ ಗೌರವ ಭಾವನೆಯಿದ್ದರೆ, ಶಬರಿಮಲೆಯಲ್ಲಿ ಆಗುತ್ತಿರುವ ಬೆಳವಣಿಗೆ ಬಗ್ಗೆ ತನಗೆ ಆತಂಕವಿದೆ. ಕೇರಳ ರಾಜ್ಯದ ಎಡರಂಗ ಸರಕಾರ ಪರಿಸ್ಥಿತಿ ನಿಭಾಯಿಸುವಲ್ಲಿ ಸಂಪೂರ್ಣ ವಿಫಲವಾಗಿದೆ. ಶಬರಿಮಲೆ ವಿಚಾರದಲ್ಲಿ ಸರಿಯಾದ ನಿರ್ಧಾರ ಕೈಗೊಂಡಿದ್ದರೆ ಆತಂಕದ ಛಾಯೆ ಆವರಿಸುತ್ತಿರಲಿಲ್ಲ.
>
> -ಬಿ.ಎಸ್.ಯಡಿಯೂರಪ್ಪ
> ಬಿಜೆಪಿ ರಾಜ್ಯಾಧ್ಯಕ್ಷ

> ಟಿಪ್ಪು ಆಳ್ವಿಕೆಗೂ, ಕೇರಳ ರಾಜ್ಯದ ಎಡರಂಗ ಆಡಳಿತಕ್ಕೂ ಯಾವುದೇ ವ್ಯತ್ಯಾಸಗಳಿಲ್ಲ. ಶಬರಿಮಲೆ ವಿಚಾರದಲ್ಲಿ ಕರ್ನಾಟಕದ 6 ಕೋಟಿ ಜನರು ಕೇರಳದ ಪರ ಇದ್ದಾರೆ.
>
> -ಕೋಟ ಶ್ರೀನಿವಾಸ ಪೂಜಾರಿ
> ಕರ್ನಾಟಕ ವಿಧಾನ ಪರಿಷತ್ ಪ್ರತಿಪಕ್ಷ ನಾಯಕ

ರೆಡ್ಡಿ ಬಳ್ಳಾರಿ ನಿವಾಸದ ಮೇಲೆ ಸಿಸಿಬಿ ದಾಳಿ

ಬಳ್ಳಾರಿ: ಮಾಜಿ ಸಚಿವ ಗಾಲಿ ಜನಾರ್ದನರೆಡ್ಡಿ ಅವರ ಬಳ್ಳಾರಿ ನಿವಾಸದ ಮೇಲೆ ಬೆಂಗಳೂರು ಸಿಸಿಬಿ ಅಧಿಕಾರಿ ಮಂಜುನಾಥ ಚೌಧರಿ ನೇತೃತ್ವದ ತಂಡ ಗುರುವಾರ ದಾಳಿ ನಡೆಸಿ, ಪರಿಶೀಲನೆ ನಡೆಸಿತು.

ಬೆಂಗಳೂರಿನಿಂದ ಎರಡು ವಾಹನಗಳಲ್ಲಿ ಮಂಜುನಾಥ ಚೌಧರಿ ನೇತೃತ್ವದ ಹತ್ತು ಮಂದಿ ಅಧಿಕಾರಿಗಳ ತಂಡ ನಗರದ ಅವಂಬಾವಿಯ ರೆಡ್ಡಿಯ ನಿವಾಸದ ಮೇಲೆ ದಾಳಿ ನಡೆಸಿ, ರೆಡ್ಡಿ ಮಾವ ಪರಮೇಶ್ವರ ರೆಡ್ಡಿ ಅವರನ್ನು ವಿಚಾರಣೆಗೆ ಒಳಪಡಿಸಿತು. ರೆಡ್ಡಿ ಮನೆ ಮೇಲೆ ಬೆಂಗಳೂರು ಸಿಸಿಬಿ ಪೊಲೀಸರು ದಾಳಿ ನಡೆಸಿದ ವಿಷಯ ತಿಳಿದ ಕೂಡಲೇ ಶಾಸಕ ಶ್ರೀರಾಮುಲು ಅವರು ರೆಡ್ಡಿ ನಿವಾಸಕ್ಕೆ ಆಗಮಿಸಿದರು.ಸಿಸಿಬಿ ಅಧಿಕಾರಿಗಳು ಜನಾರ್ದನರೆಡ್ಡಿಯವರ ಮನೆ ಮತ್ತು ಮಹಡಿ ಸೇರಿದಂತೆ ಮನೆಯ ಎಲ್ಲ ಭಾಗದ ಚಿತ್ರೀಕರಣ ಮಾಡಿಕೊಂಡರು . ಮನೆಯ ಮಹಡಿ ಮೇಲೆ ತೆರಳಿ, ಮೊಬೈಲ್‌ನಲ್ಲಿ ಪ್ರಾಂಗಣ ಹಾಗೂ ಹೊರಾಂಗಣ ಸೇರಿದಂತೆ ಇತರೆ ದೃಶ್ಯಗಳನ್ನು ಸೆರೆ ಹಿಡಿದರು. ದಾಳಿ ಸಮಯದಲ್ಲಿ ರಂಪಾಟ ನಡೆಸಿದ ಜನಾರ್ದನರೆಡ್ಡಿ ಅತ್ತೆ ನಾಗಲಕ್ಷ್ಮಮ್ಮ, ಹಬ್ಬ, ಹರಿದಿನ, ಮದುವೆ ಸಮಾರಂಭದ ವೇಳೆ ನಮ್ಮವರ ಮನೆ ಮೇಲೆ ದಾಳಿ ಮಾಡುತ್ತೀರಿ ಎಂದು ಸಿಸಿಬಿ ಅಧಿಕಾರಿಗಳನ್ನು ತರಾಟೆಗೆ ತೆಗೆದುಕೊಂಡದ್ದರಿಂದ ಮಹಿಳಾ ಪೇದೆಯೊಬ್ಬರನ್ನು ಮನೆ ಒಳಗಡೆ ಕರೆಯಿಸಿಕೊಳ್ಳಲಾಯಿತು ಎನ್ನಲಾಗಿದೆ. ಮಧ್ಯಾಹ್ನದವರೆಗೂ ದಾಳಿ ಮುಂದುವರಿದಿತ್ತು. ರೆಡ್ಡಿ ಮನೆಯ ಮೇಲೆ ದಾಳಿ ನಡೆಸಿದ ಸಿಸಿಬಿ ಪೊಲೀಸರು ನಂತರ ಪಕ್ಕದಲ್ಲಿರುವ ಒಎನ್‌ಸಿ ಕಚೇರಿಗೆ ತೆರಳಿ ಅಲ್ಲಿಯೂ ಶೋಧ ಕಾರ್ಯ ನಡೆಸಿದರು ಎಂದು ಗೊತ್ತಾಗಿದೆ.

ಜನಾರ್ದನ ರೆಡ್ಡಿ ನಮ್ಮ ಪಕ್ಷದಲ್ಲಿಲ್ಲ

ಮಂಗಳೂರು: ಮಾಜಿ ಸಚಿವ ಜನಾರ್ದನ ರೆಡ್ಡಿ ಮೇಲಿನ ಆರೋಪಕ್ಕೆ ಸಂಬಂಧಿಸಿ ನನಗೇನೂ ಗೊತ್ತಿಲ್ಲ. ಯಾರೇ ಆದರೂ ತಪ್ಪು ಮಾಡಿದ್ದರೆ ಅವರ ವಿರುದ್ಧ ಕ್ರಮ ಕೈಗೊಳ್ಳಲಿ. ಜನಾರ್ದನ ರೆಡ್ಡಿ ಈಗ ನಮ್ಮ ಪಕ್ಷದಲ್ಲಿಲ್ಲ. ಅವರ ಮೇಲಿನ ಆರೋಪದ ಬಗ್ಗೆ ನನಗೆ ಯಾವುದೇ ಮಾಹಿತಿ ಇಲ್ಲ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಬಿ.ಎಸ್. ಯಡಿಯೂರಪ್ಪ ಹೇಳಿದ್ದಾರೆ.

ಹಾವೇರಿಯಲ್ಲಿ ಹಮ್ಮಿಕೊಂಡಿದ್ದ ಹೋರಿ ಹಬ್ಬದಲ್ಲಿ ಪಾಲ್ಗೊಂಡ ಯುವಕರು.

ತೃತೀಯ ರಂಗದ ಜವಾಬ್ದಾರಿ ಗೌಡರ ಹೆಗಲಿಗೆ ನಾಯ್ಡು

← ಮೊದಲಪುಟದಿಂದ

ಬಿಜೆಪಿ ವಿರುದ್ಧ ಕಿಡಿ: ರಾಷ್ಟ್ರದ ಪ್ರಜಾಪ್ರಭುತ್ವ ವ್ಯವಸ್ಥೆ ಉಳಿಸಲು ಜಾತ್ಯತೀತ ಪಕ್ಷಗಳು 2019ರ ಚುನಾವಣೆಗೆ ಒಂದಾಗುವುದು ಅನಿವಾರ್ಯತೆ ಇದೆ. ಐಟಿ, ಇಡಿ, ಸಿಬಿಐ ಸ್ವಾಯತ್ತ ಸಂಸ್ಥೆಗಳನ್ನ ದುರ್ಬಳಕೆ ಮಾಡಿಕೊಳ್ಳುತ್ತಿದೆ. ಕರ್ನಾಟಕ, ತೆಲಂಗಾಣ, ಬಿಹಾರ, ತಮಿಳುನಾಡು, ಗುಜರಾತ್ ರಾಜ್ಯಗಳಲ್ಲಿ ಈ ಸಂಸ್ಥೆಗಳ ಮೂಲಕ ವಿಪಕ್ಷಗಳನ್ನು ಹಣಿಯುವ ಕೆಲಸ ಮಾಡುತ್ತಿದೆ. ಜನಸಾಮಾನ್ಯರನ್ನು ಸಂಕಷ್ಟಕ್ಕೆ ಸಿಲುಕಿಸುತ್ತಿರುವ ಎನ್‌ಡಿಎ ನೇತೃತ್ವದ ಕೇಂದ್ರ ಸರಕಾರವನ್ನು ಕಿತ್ತೊಗೆಯುವ ಕಾಲ ಬಂದಿದೆ ಎಂದು ಕೇಂದ್ರ ಸರಕಾರದ ವಿರುದ್ಧ ಹರಿಹಾಯ್ದರು.

ಒಂದುಗೂಡಿಸಲು ದೇವೇಗೌಡ ಮಧ್ಯಸ್ಥಿಕೆ

ಮಾಜಿ ಪ್ರಧಾನಿ ಎಚ್.ಡಿ.ದೇವೇಗೌಡ ಅವರು ರಾಜಕೀಯದಲ್ಲಿ ಹಿರಿಯರು. ತೃತೀಯ ರಂಗ ರಚನೆ ಕುರಿತು ಈ ಭೇಟಿಯಲ್ಲಿ ಚಂದ್ರಬಾಬು ನಾಯ್ಡು ಅವರು ದೇವೇಗೌಡ ಅವರಿಗೆ ಸಲಹೆ, ಮಾರ್ಗದರ್ಶನ ನೀಡಲು ಮನವಿ ಮಾಡಿಕೊಂಡಿದ್ದಾರೆ. ತೃತೀಯ ರಂಗದ ನೇತೃತ್ವ ವಹಿಸಿ ಶಕ್ತಿ ತುಂಬಬೇಕು ಎಂದೂ ಕೇಳಿದ್ದಾರೆ. 2019ರ ಲೋಕಸಭಾ ಚುನಾವಣೆಯಲ್ಲಿ ಹೊಸ ಸರಕಾರ ಅಧಿಕಾರಕ್ಕೆ ತಂದು ವ್ಯವಸ್ಥೆಯನ್ನು ಸರಿಪಡಿಸಲು ಜಾತ್ಯತೀತ ಮನಸ್ಕರು ಒಂದಾಗಿ ಕೆಲಸ ಮಾಡಲು ನಿರ್ಧರಿಸಲಾಗಿದೆ. ಈಗಾಗಲೇ ಚದುರಿರುವ ನಾಯಕರನ್ನು ಒಂದುಗೂಡಿಸಲು ಮಧ್ಯಸ್ಥಿಕೆ ವಹಿಸಿಕೊಳ್ಳಲು ಚಂದ್ರಬಾಬು ನಾಯ್ಡು ಮನವಿ ಮಾಡಿಕೊಂಡಿದ್ದಾರೆ.

ರೆಡ್ಡಿ ಹೋದದ್ದೆಲ್ಲಿಗೆ?

← ಮೊದಲಪುಟದಿಂದ

ಪ್ರಕರಣ ಬೆಳಕಿಗೆ ಬಂದ ದಿನದಿಂದ ಜನಾರ್ದನ ರೆಡ್ಡಿ, ಸಾರ್ವಜನಿಕವಾಗಿ ಕಾಣಿಸಿಕೊಂಡಿಲ್ಲ, ಮೊಬೈಲ್ ಸ್ವಿಚ್‌ಆಫ್ ಮಾಡಿಕೊಂಡಿರುವುದರಿಂದ ಪೊಲೀಸರ ತನಿಖೆ ನಿಂತಲ್ಲೇ ಗಿರಕಿ ಹೊಡೆಯುತ್ತಿದೆ.

ಬೆಂಗಳೂರು, ಹೈದರಾಬಾದ್, ಚಿತ್ರದುರ್ಗ ಮತ್ತು ಬಳ್ಳಾರಿ ಸೇರಿದಂತೆ ಸ್ನೇಹಿತರ ಮನೆ ಸಂಬಂಧಿಕರ ಮನೆಗಳಲ್ಲಿ ಸಿಸಿಬಿ ಪೊಲೀಸರು ಶೋಧ ಕಾರ್ಯ ಮುಂದುವರಿಸಿದ್ದಾರೆ. ಬಳ್ಳಾರಿಯ ಮನೆಯಲ್ಲಿ ಶೋಧ ಕಾರ್ಯ ನಡೆಸಿದ ಸಿಸಿಬಿ ತಂಡಕ್ಕೆ ಮಹತ್ವದ ದಾಖಲೆ ಸಿಕ್ಕಿದ್ದು, ಪ್ರಕರಣಕ್ಕೆ ತಿರುವು ದೊರೆತಿದೆ ಎನ್ನಲಾಗಿದೆ.

ನಗರದಲ್ಲಿರುವ ಜನಾರ್ದನ ರೆಡ್ಡಿಯ ಪಾರಿಜಾತ ಅಪಾರ್ಟ್‌ಮೆಂಟ್ ಪರಿಶೀಲನೆ ನಡೆಸಿದ ವೇಳೆ 57 ಕೆಜಿ ಚಿನ್ನ ಸಾಗಣೆ ಕುರಿತು ಮಹತ್ವದ ದಾಖಲೆಗಳು ಲಭ್ಯವಾಗಿವೆ ಎನ್ನಲಾಗಿದೆ. ಸಿಸಿಬಿ ಪೊಲೀಸರು ಬುಧವಾರ 6 ಗಂಟೆಗಳ ಕಾಲ ಜನಾರ್ದನ ರೆಡ್ಡಿಯ ಪಾರಿಜಾತ ಅಪಾರ್ಟ್‌ಮೆಂಟ್‌ನಲ್ಲಿ ಪರಿಶೀಲನೆ ನಡೆಸಿದ್ದರು. ಈ ವೇಳೆ ಜನಾರ್ದನ ರೆಡ್ಡಿ ಡೀಲ್ ಪ್ರಕರಣದಲ್ಲಿ 57 ಕೆಜಿ ಚಿನ್ನ ಸಾಗಣೆ ಕುರಿತು, ಎರಡು ದಾಖಲೆಗಳು ದೊರೆತಿವೆ ಎನ್ನಲಾಗಿದೆ.

ಜನಾರ್ದನ ರೆಡ್ಡಿ ಬಂಧನಕ್ಕೂ ಮುನ್ನವೇ 57 ಕೆಜಿ ಚಿನ್ನಾಭರಣ ಎಲ್ಲಿದೆ, ಯಾರ ಬಳಿ ಇದೆ ಎಂಬುದನ್ನು ಪತ್ತೆ ಹಚ್ಚಲು ಸಿಸಿಬಿ ಅಧಿಕಾರಿಗಳು ತೀವ್ರ ಹುಡುಕಾಟ ನಡೆಸಿದ್ದಾರೆ.

ಬೆಳಗ್ಗೆಯಿಂದಲೇ ಕಾರ್ಯಾಚರಣೆ: ಡಿಸಿಪಿ ಗಿರೀಶ್ ನೇತೃತ್ವದ ತಂಡ ಬೆಳಗ್ಗೆ 6 ಗಂಟೆಯಿಂದಲೇ ಶೋಧ ಕಾರ್ಯಕ್ಕೆ ಮುಂದಾಗಿದೆ. ಸಿಸಿಬಿ ಹೆಚ್ಚುವರಿ ಪೊಲೀಸ್ ಆಯುಕ್ತ ಅಲೋಕ್ ಕುಮಾರ್, ಹೈದಾರಾಬಾರ್, ಬಳ್ಳಾರಿ, ಬೆಂಗಳೂರು ಭಾಗದ ಅಧಿಕಾರಿಗಳಿಗೆ ಎಚ್ಚರಿಕೆಯಿಂದಿರಲು ಸೂಚನೆ ನೀಡಿದ್ದಾರೆ.

ವಿಡಿಯೋ ಲೀಕ್: ಅಲೋಕ್ ಗರಂ: ತನಿಖೆ ನಡೆಸುತ್ತಿರುವ ವಿಡಿಯೋಗಳು ಈಗಾಗಲೇ ಹಲವು ಮಾಧ್ಯಮಗಳಲ್ಲಿ ಪ್ರಸಾರವಾಗುತ್ತಿರುವುದಕ್ಕೆ ಅಲೋಕ್ ಕುಮಾರ್ ತಮ್ಮ ಇಲಾಖೆಯ ಸಿಬ್ಬಂದಿ ವಿರುದ್ಧ ಆಕ್ರೋಶ ವ್ಯಕ್ತಪಡಿಸಿದ್ದಾರೆ. ದಾಖಲೆಗಳನ್ನು ಸಾರ್ವಜನಿಕವಾಗಿ ಲೀಕ್ ಮಾಡಲಾಗುತ್ತಿದೆ ಎಂದು ಜನಾರ್ದನ ರೆಡ್ಡಿ ಪರ ವಕೀಲರ ಆರೋಪಕ್ಕೆ ಪೂರಕವಾಗಿ ಸಿಸಿಬಿ ಹೆಚ್ಚುವರಿ ಪೊಲೀಸ್ ಆಯುಕ್ತ ಅಲೋಕ್ ಕುಮಾರ್ ಕೂಡ ಈ ವಿಚಾರದ ಬಗ್ಗೆ ಕಿಡಿಕಾರಿದ್ದಾರೆ. ಸಿಸಿಬಿ ಪೊಲೀಸರು ಮಹಜರು ನಡೆಸುವ ವಿಡಿಯೋ ಮಾಧ್ಯಮಗಳಲ್ಲಿ ಬಿತ್ತರವಾಗುತ್ತಿರುವುದಕ್ಕೆ ಸಿಸಿಬಿ ಅಧಿಕಾರಿಗಳನ್ನು ತರಾಟೆಗೆ ತೆಗೆದುಕೊಂಡಿದ್ದಾರೆ.

ಇಂಥ ಕಣ್ಣಾ ಮುಚ್ಚಾಲೆ ಆಟವಾಡೋದು ಬೇಡ, ಮಾಡುವ ಕೆಲಸವನ್ನು ಶ್ರದ್ಧೆಯಿಂದ ಮಾಡಿ. ಇಲ್ಲದಿದ್ದರೆ ಪರಿಣಾಮ ನೆಟ್ಟಗಿರಲ್ಲ. ನಮ್ಮವರಲ್ಲದೇ ಬೇರೆ ಯಾರು ಈ ವಿಡಿಯೋ ಲೀಕ್ ಮಾಡಲು ಸಾಧ್ಯ? ತನಿಖೆಯ ಒಂದೇ ಒಂದು ವಿಡಿಯೋ ತುಣುಕು ಮಾಧ್ಯಮಗಳಿಗೆ ಹೋದರೂ ಪರಿಣಾಮ ಬೇರೆಯದೇ ಆಗುತ್ತೆ. ರಾತ್ರಿ ಹಗಲು ಎನ್ನದೇ ಕೆಲಸ ಮಾಡಿ ಮುಗಿಸಲು ನಾವು ಪ್ರಯತ್ನ ಮಾಡುತ್ತಿದ್ದರೆ ನೀವು ಆಟವಾಡುತ್ತಿದ್ದೀರಾ? ಮಹಜರು ವಿಡಿಯೋಗಳು ಲೀಕ್ ಆಗಿರುವ ಬಗ್ಗೆ ತನಿಖೆಗೆ ಆದೇಶಿಸಿದ್ದೇನೆ. ಉತ್ತರ ಕೊಡಿ, ಎಂದು ಸಿಸಿಬಿ ಕಚೇರಿಯಲ್ಲಿ ಅಲೋಕ್ ಕುಮಾರ್ ಎಚ್ಚರಿಕೆ ಕೊಟ್ಟಿದ್ದಾರೆ.

ಗೌಪ್ಯತೆ ಪ್ರಶ್ನಿಸಿದ ವಕೀಲರು: ಜನಾರ್ದನ ರೆಡ್ಡಿ ಅವರಿಗೆ ಕಳಂಕ ತರಲು ನಡೆಸುತ್ತಿರುವ ಷಡ್ಯಂತ್ರ ಇದಾಗಿದ್ದು, ತನಿಖೆಯ ದಾಖಲೆಗಳನ್ನು ಗೌಪ್ಯವಾಗಿಡುವ ಬದಲು ಸಾರ್ವಜನಿಕವಾಗಿ ಯಾಕೆ ಪ್ರದರ್ಶಿಸಲಾಗುತ್ತಿದೆ. ಅದನ್ನು ಲೀಕ್ ಮಾಡುತ್ತಿದ್ದಾರೆ ಎಂದು ಕಿಡಿ ಕಾರಿದ್ದಾರೆ.

ಪ್ರಕರಣದಲ್ಲಿ ಜನಾರ್ದನ ರೆಡ್ಡಿ ಭಾಗಿಯಾಗಿದ್ದಾರೆಂದು ತನಿಖೆಯ ಮೊದಲೇ ಬಿಂಬಿಸುವ ಪ್ರಯತ್ನ ನಡೆಯುತ್ತಿದ್ದು, ಸಾಕ್ಷ್ಯಗಳಿವೆ ಎಂದು ಹೇಳುತ್ತಾರೆ. ಜನಾರ್ದನ ರೆಡ್ಡಿಯ ಸಹಿ ಇದೆ, ದಾಖಲೆಗಳು ಇದೆ ಎಂದೆಲ್ಲಾ ಸುಳ್ಳು ಹೇಳುತ್ತಾರೆ. ಮಾಧ್ಯಮಗಳಲ್ಲಿ ಸುದ್ದಿ ಬರುವಂತೆ ಮಾಡುತ್ತಾರೆ. ತನಿಖೆಯ ದಾಖಲೆಗಳನ್ನು ರಹಸ್ಯವಾಗಿಡುವುದು ಬಿಟ್ಟು ಸಾರ್ವಜನಿಕವಾಗಿ ಹೊರ ತರುತ್ತಿದ್ದಾರೆ. ಒಟ್ಟಿನಲ್ಲಿ, ಸಾರ್ವಜನಿಕವಾಗಿ ಜನಾರ್ದನ ರೆಡ್ಡಿ ಮೇಲೆ ಕಳಂಕ ಬರುವಂತೆ ಮಾಡುವ ಷಡ್ಯಂತ್ರ ನಡೆದಿದೆ, ಎಂದು ಗಾಲಿ ಜನಾರ್ದನ ರೆಡ್ಡಿ ಪರ ವಕೀಲ ಚಂದ್ರಶೇಖರ್ ರೆಡ್ಡಿ ಹೇಳಿದ್ದಾರೆ.

ಜನಾರ್ದನ ರೆಡ್ಡಿ ಪರಾರಿಯಾಗಿದ್ದಾರೆಂಬ ಸುದ್ದಿಯನ್ನು ಅಲ್ಲಗಳೆದ ಅವರು, ಲಾಯರ್ ಮೂಲಕ ಕೋರ್ಟ್‌ಗೆ ಹಾಜರಾತಿ ಹಾಕಿದ್ದರೂ ಪರಾರಿ ಎಂದು ಹೇಳುವುದು ತಪ್ಪು. ಜನಾರ್ದನ ರೆಡ್ಡಿ ಎಲ್ಲಿಯೂ ತಪ್ಪಿಸಿಕೊಂಡು ಹೋಗಿಲ್ಲ. ಅವರ ವಿರುದ್ಧದ ಆರೋಪ ಹಸಿ ಸುಳ್ಳು ಎಂದರು.

ಆಳ್ವಾಸ್ ನುಡಿಸಿರಿ ಪ್ರಶಸ್ತಿ ಪ್ರಕಟ

ವಿಶ್ವವಾಣಿ ಸುದ್ದಿಮನೆ ಮೂಡಬಿದಿರೆ

ಆಳ್ವಾಸ್ ಶಿಕ್ಷಣ ಪ್ರತಿಷ್ಠಾನದಿಂದ ಕನ್ನಡ ನಾಡುನುಡಿ ಸಂಸ್ಕೃತಿಯ ರಾಷ್ಟ್ರೀಯ ಸಮ್ಮೇಳನ ಆಳ್ವಾಸ್ ನುಡಿಸಿರಿ-2018ರ ಪ್ರಯುಕ್ತ ನೀಡಲಾಗುವ ಆಳ್ವಾಸ್ ನುಡಿಸಿರಿ ಪುರಸ್ಕಾರವನ್ನು ಈ ಬಾರಿ ಕನ್ನಡ ನಾಡು, ನುಡಿಗೆ ಶ್ರಮಿಸಿದ 12 ಸಾಧಕರಿಗೆ ನೀಡಿ ಗೌರವಿಸಲಾಗುವುದು ಎಂದು ಪ್ರತಿಷ್ಠಾನದ ಅಧ್ಯಕ್ಷ ಡಾ.ಎಂ.ಮೋಹನ್ ಆಳ್ವ ತಿಳಿಸಿದ್ದಾರೆ.

ಸುದ್ದಿಗೋಷ್ಠಿಯಲ್ಲಿ ಮಾತನಾಡಿ, ಡಾ.ಜಿ.ಡಿ.ಜೋಶಿ ಮುಂಬೈ(ಸಾಹಿತ್ಯ, ಶಿಕ್ಷಣ), ಡಾ.ಎ.ವಿ.ನರಸಿಂಹಮೂರ್ತಿ ಮೈಸೂರು (ಇತಿಹಾಸ ತಜ್ಞ), ಡಾ.ಭಾರತಿ ವಿಷ್ಣುವರ್ಧನ್ ಬೆಂಗಳೂರು(ಸಿನೆಮಾ), ಡಾ.ಅರುಂಧತಿ ನಾಗ್ (ರಂಗಭೂಮಿ), ಎಲ್.ಬಂದೇನವಾಝ್ ಖಲೀಪ್ ಆಲ್ದಾಳ ಕಲಬುರಗಿ (ರಂಗ ನಿರ್ದೇಶನ), ಡಾ.ಕೆ.ರಮಾನಂದ ಬನಾರಿ ಕಾಸರಗೋಡು(ಸಾಹಿತ್ಯ), ಡಾ.ನರಹಳ್ಳಿ ಬಾಲಸುಬ್ರಹ್ಮಣ್ಯ(ಸಾಹಿತ್ಯ, ವಿಮರ್ಶೆ), ಪ್ರೊ.ಎ.ವಿ.ನಾವಡ ಮಂಗಳೂರು(ಸಾಹಿತ್ಯ), ಫಾ.ಪ್ರಶಾಂತ್ ಮಾಡ್ತ(ಸಾಹಿತ್ಯ ಸೇವೆ) ಹೊ.ನಾ.ರಾಘವೇಂದ್ರ, (ಸುಗಮ ಸಂಗೀತ), ಅರುವ ಕೊರಗಪ್ಪ ಶೆಟ್ಟಿ(ಯಕ್ಷಗಾನ) ಡಾ. ಮೈಸೂರು ನಟರಾಜ, ವಾಷಿಂಗ್‌ಟನ್(ಸಾಹಿತ್ಯ ಸೇವೆ) ಪ್ರಶಸ್ತಿಗೆ ಆಯ್ಕೆಯಾದ ಸಾಧಕರು. ನ.18ರಂದು ಸಂಜೆ ನಡೆಯುವ ಆಳ್ವಾಸ್ ನುಡಿಸಿರಿ ಸಮಾರೋಪದಲ್ಲಿ ಈ ಸಾಧಕರಿಗೆ 25,000 ರು. ನಗದು, ಪುರಸ್ಕಾರ, ಪ್ರಶಸ್ತಿ ಪತ್ರ ಹಾಗೂ ಸ್ಮರಣಿಕೆ ನೀಡಿ ಗೌರವಿಸಲಾಗುವುದು ಎಂದು ತಿಳಿಸಿದರು.

ಆಳ್ವಾಸ್ ನುಡಿಸಿರಿ ಸ್ವಾಗತ ಸಮಿತಿಯ ಕಾರ್ಯದರ್ಶಿ ವೇಣುಗೋಪಾಲ್ ಶೆಟ್ಟಿ, ಆಳ್ವಾಸ್ ಶಿಕ್ಷಣ ಪ್ರತಿಷ್ಠಾನದ ಪಿಆರ್‌ಒ ಡಾ.ಪದ್ಮನಾ ಶೆಣೈ ಇದ್ದರು.

ಶಿಕ್ಷಕರ ಪ್ರತಿಭಟನೆ ಇಂದು

ಬೆಂಗಳೂರು: ಬೆಳಗಾವಿ ಅಧಿವೇಶನದಲ್ಲಿ ಶಿಕ್ಷಕರ ವರ್ಗಾವಣೆ ಕಾಯ್ದೆಯಲ್ಲಿರುವ ಅವೈಜ್ಞಾನಿಕ ನಿಯಮಗಳನ್ನು ತಿದ್ದುಪಡಿ ತರಬೇಕು ಹಾಗೂ 2017-18ನೇ ಸಾಲಿನ ಶಿಕ್ಷಕರ ವರ್ಗಾವಣೆ ಪ್ರಕ್ರಿಯೆಯನ್ನು ಮುಂದುವರಿಸಬೇಕು ಎಂದು ಒತ್ತಾಯಿಸಿ ಕರ್ನಾಟಕ ರಾಜ್ಯ ಶಿಕ್ಷಕರ ಹೋರಾಟ ಸಮಿತಿ ನ.9 ರಂದು ಬೆಂಗಳೂರಿನ ಸ್ವತಂತ್ರ ಉದ್ಯಾನದಲ್ಲಿ ಬೃಹತ್ ಪ್ರತಿಭಟನೆ ನಡೆಸಲಿದೆ.

ಸುದ್ದಿಗೋಷ್ಠಿಯಲ್ಲಿ ಸಮಿತಿಯ ಅಧ್ಯಕ್ಷ ಮಾಲತೇಶ ಬಬ್ಬಜ್ಜಿ ಮಾತನಾಡಿ, ಕಳೆದ ಎರಡು ಮೂರು ವರ್ಷಗಳಿಂದ ಶಿಕ್ಷಕರ ವರ್ಗಾವಣೆ ಮಾಡುವ ಪ್ರಕ್ರಿಯೆ ಸ್ಥಗಿತಗೊಳಿಸಲಾಗಿತ್ತು. ಬಳಿಕ 2017-18ನೇ ಸಾಲಿನಲ್ಲಿ ಹೆಚ್ಚು ವರ್ಷ ಒಂದೇ ಕಡೆ ಸೇವೆ ಸಲ್ಲಿಸಿರುವ ಶಿಕ್ಷಕರನ್ನು ವರ್ಗಾವಣೆ ಮಾಡಲಾಗುವುದು ಎಂದು ಸರಕಾರ ಆದೇಶ ಹೊರಡಿಸಿತ್ತು. ಆದರೆ, ಮುಖ್ಯಮಂತ್ರಿ ಅವರು ಸದ್ಯ ವರ್ಗಾವಣೆ ಪ್ರಕ್ರಿಯೆ ಬೇಡ ಎಂದಿರುವುದು ನಮಗೆ ಬೇಸರ ತಂದಿದೆ ಎಂದು ಕಳವಳ ವ್ಯಕ್ತಪಡಿಸಿದರು.

ವರ್ಗಾವಣೆ ಮಾಡುವ ವಿಚಾರ ಕೇಳಿ ತುಂಬಾ ಸಂತಸವಾಗಿತ್ತು. ಆದರೆ, ಸಿಎಂ ಮುಂದಿನ ವರ್ಷ ವರ್ಗಾವಣೆ ಮಾಡಲು ಅಧಿಕಾರಿಗಳಿಗೆ ಸೂಚಿಸಿದ್ದಾರೆ. ಈ ಹೇಳಿಕೆಯಿಂದ ಶಿಕ್ಷಕರಿಗೆ ತುಂಬಾ ನಿರಾಸೆಯನ್ನುಂಟು ಮಾಡಿದೆ. ಅಲ್ಲದೆ ಬೆಳಗಾವಿ ಅಧಿವೇಶನದಲ್ಲಿ ಶಿಕ್ಷಕರ ವರ್ಗಾವಣೆ ಕಾಯ್ದೆಯಲ್ಲಿರುವ ಅವೈಜ್ಞಾನಿಕ ನಿಯಮಗಳನ್ನು ತಿದ್ದುಪಡಿ ತರಬೇಕು ಅಥವಾ ಆ ನಿಯಮಗಳನ್ನು ರದ್ದುಪಡಿಸಬೇಕು ಎಂದು ಮನವಿ ಮಾಡಿಕೊಂಡರು.